# ಕನ್ನಡ ವಿಶ್ವವಿದ್ಯಾಲಯ, ಹಂಪಿ

## ಅಭಿವೃದ್ಧಿ ಅಧ್ಯಯನ ವಿಭಾಗ

**ಲಿಂ.ವೇ. ಸಿದ್ಧರಾಮಯ್ಯ ಮತ್ತು ಗಂಗಮ್ಮ ಸ್ಮಾರಕ ದತ್ತಿ ಅರಸೀಕೆರೆ**

ಇವರಿಂದ ಕೊಡಮಾಡುವ

## ಕನ್ನಡ ವಿಶ್ವವಿದ್ಯಾಲಯದ ಮಾನ್ಯ ಕುಲಪತಿ **ಡಾ.ಡಿ.ವಿ. ಪರಮಶಿವಮೂರ್ತಿ** ಅವರಿಗೆ
## ಸಿದ್ಧರಾಮ ಸಾಹಿತ್ಯ ಪ್ರಶಸ್ತಿ ಪ್ರದಾನ

ದಿನಾಂಕ 14 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಶ್ರೀ ಸಿದ್ಧರಾಮ ಜಯಂತಿ ಕಾರ್ಯಕ್ರಮದಲ್ಲಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಡಿ.ವಿ.ಪರಮಶಿವಮೂರ್ತಿಯವರಿಗೆ **ಶ್ರೀ ಸಿದ್ಧರಾಮ ಸಾಹಿತ್ಯ ಪ್ರಶಸ್ತಿ**ಯನ್ನು ನೀಡಿ ಗೌರವಿಸಲಾಯಿತು. ಅವರ ಸಂಶೋಧನಾ ಕ್ಷೇತ್ರದ ಸಾಧನೆಯನ್ನು ಪರಿಗಣಿಸಿ ಈ ಪ್ರಶಸ್ತಿಯನ್ನು ನೀಡಲಾಗಿದೆ. ಪ್ರಶಸ್ತಿಯನ್ನು ನೀಡಿದ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿವರು ಸಂಶೋಧಕರಿಗೆ ಮತ್ತು ಸಾಹಿತಿಗಳಿಗೆ ಸಮಾಜದಿಂದ ಸೂಕ್ತ ಗೌರವ ಸಿಗಬೇಕು. ಆಗ ಅವರ ಆತ್ಮವಿಶ್ವಾಸ ಹೆಚ್ಚುತ್ತದೆ ಮತ್ತು ಅವರಿಗೆ ಇನ್ನೂ ಹೆಚ್ಚಿನ ಕೆಲಸ ಮಾಡಲು ಪ್ರೇರಣೆಯಾಗುತ್ತದೆ ಎಂದು ಹೇಳಿದರು. ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಈ ಸಂದರ್ಭದಲ್ಲಿ ಮಾಜಿ ಉಪಮುಖ್ಯಮಂತ್ರಿಗಳಾದ ಡಾ.ಅಶ್ವತ್ಥನಾರಾಯಣ್, ಸಿ.ಟಿ.ರವಿ, ಜೆ.ಸಿ.ಮಾಧುಸ್ವಾಮಿ, ಚಿತ್ರನಟ ಡಾಲಿ ಧನಂಜಯ ಮುಂತಾದ ಗಣ್ಯರು ಹಾಜರಿದ್ದರು.




ಮಾಹಿತಿ ಕೇಂದ್ರ

ಗುರುವಾರ,16 ಜನವರಿ 2025, ಗಂಗಾವತಿ

ವಿಜಯ ಕರ್ನಾಟಕ VK

### ಕನ್ನಡ ವಿವಿ ಕುಲಪತಿಗೆ ಪ್ರಶಸ್ತಿ ಪ್ರದಾನ

**ವಿಜಯನಗರ (ಹೊಸಪೇಟೆ):** ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಡಿ.ವಿ. ಪರಮಶಿವಮೂರ್ತಿ ಅವರಿಗೆ ಬೆಂಗಳೂರಿನ ಆರಮನೆ ಮೈದಾನದಲ್ಲಿ ಮಂಗಳವಾರ ನಡೆದ ಶ್ರೀ ಸಿದ್ಧರಾಮ ಜಯಂತಿಯಲ್ಲಿ ಶ್ರೀ ಸಿದ್ಧರಾಮ ಸಾಹಿತ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕುಲಪತಿಗಳ ಸಂಶೋಧನಾ ಕ್ಷೇತ್ರದ ಸಾಧನೆ ಪರಿಗಣಿಸಿ ಈ ಪ್ರಶಸ್ತಿ ನೀಡಲಾಗಿದೆ. ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಶೋಧಕರಿಗೆ ಮತ್ತು ಸಾಹಿತಿಗಳಿಗೆ ಸಮಾಜದಿಂದ ಸೂಕ್ತ ಗೌರವ ಸಿಗಬೇಕು. ಆಗ ಅವರ ಆತ್ಮವಿಶ್ವಾಸ ಹೆಚ್ಚುತ್ತದೆ ಮತ್ತು ಅವರಿಗೆ ಇನ್ನೂ ಹೆಚ್ಚಿನ ಕೆಲಸ ಮಾಡಲು ಪ್ರೇರಣೆಯಾಗುತ್ತದೆ ಎಂದು ಹೇಳಿದರು. ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗ ಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಮಾಜಿ ಉಪಮುಖ್ಯಮಂತ್ರಿ ಡಾ.ಅಶ್ವತ್ಥನಾರಾಯಣ್, ಮಾಜಿ ಸಚಿವರಾದ ಸಿ.ಟಿ.ರವಿ, ಜೆ.ಸಿ.ಮಾಧುಸ್ವಾಮಿ, ಚಿತ್ರನಟ ಡಾಲಿ ಧನಂಜಯ ಸೇರಿ ಇತರರಿದ್ದರು.

ಬೆಳಗಾಯಿತು

# ಕುಲಪತಿ ಡಾ.ಡಿ.ವಿ. ಪರಮಶಿವಮೂರ್ತಿ ಅವರಿಗೆ ಸಿದ್ಧರಾಮ ಸಾಹಿತ್ಯ ಪ್ರಶಸ್ತಿ ಪ್ರದಾನ



ಬೆಳಗಾಯಿತು ವಾರ್ತೆ

**ಹೊಸಪೇಟೆ :** ಕನ್ನಡ ವಿಶ್ವ ವಿದ್ಯಾಲಯ, ಹಂಪಿ ಲಿಂ.ವೇ ಸಿದ್ಧರಾಮಯ್ಯ ಮತ್ತು ಗಂಗಮ್ಮ ಸ್ಮಾರಕ ದತ್ತಿ ಅರಸಿಕೆರೆ ಇವರಿಂದ ಕೊಡಮಾಡುವ ಪ್ರದಾನವಾಗುವ ಸಿದ್ಧರಾಮ ಪ್ರಶಸ್ತಿಯನ್ನು 852ನೇ ಶ್ರೀ ಗುರು ಸಿದ್ಧರಾಮೇಶ್ವರ ಮಹೋತ್ಸವ ಸಮಿತಿಯಿಂದ ಆಯ್ಕೆ ಮಾಡಲಾಗಿದ್ದು, 14ನೇ ಜನವರಿ ಬೆಂಗಳೂರಿನ ಅರಮನೆ ಮೈದಾನದ ತ್ರಿಪುರವಾಸಿನಿ ಆವರಣ ದಲ್ಲಿ ದಾನಶೂರ ಕಂಬಿ ಎಂ ಸಿದ್ಧರಾಮಣ್ಣ ಮಹಾ ಮಂಟಪದಲ್ಲಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ.ಡಿ.ವಿ. ಪರಮಶಿವ ಮೂರ್ತಿ ಅವರಿಗೆ ಸಿದ್ಧರಾಮ ಸಾಹಿತ್ಯ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಈ ಸಂದರ್ಭದಲ್ಲಿ ನೊಳಂಬ ಲಿಂಗಾಯತ ಸಮುದಾಯದ ಅಧ್ಯಕ್ಷರಾದ ಬಿ.ಕೆ. ಚಂದ್ರಶೇಖರ್. ಡಾ.ಸಿ.ಎಸ್. ಅಶ್ವಥ್ ನಾರಾಯಣ ರೆಡ್ಡಿ. ಬಸವರಾಜ ಬೊಮ್ಮಾಯಿ, ಡಾಲಿ ಧನಂಜಯ ಹಾಗೂ ನೊಳಂಬ ಲಿಂಗಾಯತ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.